# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1569 |
| ಮಾನ್ಯ ಸದಸ್ಯರ ಹೆಸರು | ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ |
| ಉತ್ತರಿಸಬೇಕಾದ ದಿನಾಂಕ | 24.09.2021 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಉತ್ತರ ಕನ್ನಡ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಿಂದ ಮಂಜೂರಾದ ಸಮುದಾಯ ಭವನಗಳೆಷ್ಟು; (ತಾಲ್ಲೂಕುವಾರು/ ಜಿಲ್ಲಾವಾರು ವಿವರ ನೀಡುವುದು) | ಉತ್ತರ ಕನ್ನಡ ಜಿಲ್ಲೆಗೆ ಕಳೆದ ಮೂರು ವರ್ಷಗಳಿಂದ ಮಂಜೂರಾದ ಭವನಗಳು, ಮಂಜೂರಾದ ಮೊತ್ತ ಹಾಗೂ ಬಿಡುಗಡೆಯಾದ ಅನುದಾನದ ತಾಲ್ಲೂಕುವಾರು ವಿವರಗಳನ್ನು ಅನುಬಂಧ-1 ರಲ್ಲಿ ನೀಡಲಾಗಿದೆ. |
| ಆ) | ಸದರಿ ಸಮುದಾಯ ಭವನಗಳಿಗೆ ಮಂಜೂರಾದ ಹಾಗೂ ಬಿಡುಗಡೆಯಾದ ಅನುದಾನ ಎಷ್ಟು; (ವಿವರ ನೀಡುವುದು) | |
| ಇ) | ಈ ಅನುದಾನ ಬಿಡುಗಡೆಗೆ ಇರುವ ಮಾನದಂಡಗಳೇನು; | ಸರ್ಕಾರದ ಆದೇಶ ಸಂಖ್ಯೆ:ಹಿಂವಕ 695 ಬಿಎಂಎಸ್ 2014(ಭಾ-2), ದಿನಾಂಕ:05.11.2014 ಹಾಗೂ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 1133 ಬಿಎಂಎಸ್ 2017, ದಿನಾಂಕ:29.11.2017ರಲ್ಲಿನ ಮಾರ್ಗಸೂಚಿಗಳನ್ವಯ ಸಹಾಯಧನ ಮಂಜೂರು ಮಾಡಲಾಗುತ್ತಿದೆ. (ಮಾರ್ಗಸೂಚಿಗಳನ್ನು ಅನುಬಂಧ-2 ರಲ್ಲಿ ನೀಡಿದೆ). |
| ಈ) | ಸಮುದಾಯ ಭವನ ಕಟ್ಟಡ ಪ್ರಗತಿಯು ಯಾವ ಹಂತದಲ್ಲಿದೆ; ಹಾಗೂ ಶೇಕಡವಾರು ಎಷ್ಟು ಅನುದಾನ ಮಂಜೂರು ಆಗಿರುತ್ತದೆ; | ಉತ್ತರ ಕನ್ನಡ ಜಿಲ್ಲೆಗೆ ಮಂಜೂರಾಗಿರುವ ಸಮುದಾಯ ಭವನಗಳ ಕಟ್ಟಡಗಳ ಪ್ರಗತಿಯ ಹಂತ ಹಾಗೂ ಅನುದಾನ ಮಂಜೂರಾಗಿರುವ ವಿವರವನ್ನು ಅನುಬಂಧ-1 ರಲ್ಲಿ ನೀಡಲಾಗಿದೆ. |
| ಉ | ಜಿಲ್ಲೆಯ ಕುಮಟಾ ತಾಲ್ಲೂಕಿನ ಹಾಲಕ್ಕಿ ಒಕ್ಕಲಿಗ ಸಂಘ (ರಿ), ಇದಕ್ಕೆ ಅನುದಾನ ಬಿಡುಗಡೆ ಮಾಡುವಾಗ ಸರ್ಕಾರದ ಮಾರ್ಗಸೂಚಿಗಳನ್ನು ಅನುಸರಿಸಲಾಗಿದೆ: ಹಾಗಿದ್ದಲ್ಲಿ ಯಾವ ಪ್ರಮಾಣದಲ್ಲಿ ಅನುದಾನ ಬಿಡುಗಡೆ ಮಾಡಲಾಗಿದೆ. ವಿವರ ನೀಡುವುದು: ಶೇಕಡಾ 25:50:25 ರ ಪ್ರಮಾಣ ಅನುಸರಿಸದಿಲ್ಲದಿರುವುದು: ಈ ಕುರಿತು ಸರ್ಕಾರ ಸೂಕ್ತ ತನಿಖೆ, ಮಾಡುವುದೇ: | ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 278 ಬಿಎಂಎಸ್ 2019, ಬೆಂಗಳೂರು ದಿನಾಂಕ: 15.12.2020 ರ ಆದೇಶದಲ್ಲಿ ಹಾಲಕ್ಕಿ ಒಕ್ಕಲಿಗರ ಸಂಘ (ರಿ), ಕುಮಟಾ, ಉತ್ತರ ಕನ್ನಡ ಜಿಲ್ಲೆ ರವರಿಗೆ ವಿಶೇಷ ಪ್ರಕರಣದಡಿ ರೂ. 100.00 ಲಕ್ಷಗಳ ಅನುದಾನ ಮಂಜೂರು ಮಾಡಿ ಬಿಡುಗಡೆ ಮಾಡಲಾಗಿರುತ್ತದೆ.<br>ಅನುದಾನ ಬಿಡುಗಡೆ ಸಮಯದಲ್ಲಿ ಕಟ್ಟಡವು ಮುಕ್ತಾಯ ಹಂತದಲ್ಲಿದ್ದುದರಿಂದ, ಮಂಜೂರಾದ ಸಂಪೂರ್ಣ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಪ್ರಸ್ತುತ ಕಾಮಗಾರಿ ಕೆಲಸ ಮುಕ್ತಾಯಗೊಂಡು ಕಟ್ಟಡವು ಉದ್ಘಾಟನೆಗೊಂಡಿರುತ್ತದೆ. |

ಸಂಖ್ಯೆ:ಹಿಂವಕ 582 ಬಿಎಂಎಸ್ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಇಲಾಖೆ

## ಅನುಬಂಧ – 1

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1569 ಕ್ಕೆ

ಉತ್ತರ ಕನ್ನಡ ಜಿಲ್ಲೆಗೆ ಕಳೆದ 3 ವರ್ಷಗಳಲ್ಲಿ ಸಮುದಾಯ ಭವನ ನಿರ್ಮಾಣಕ್ಕೆ ಮಂಜೂರಾದ, ಬಿಡುಗಡೆಯಾದ ಅನುದಾನ ಹಾಗೂ ಕಟ್ಟಡ ಪ್ರಗತಿಯ ಹಂತದ ವಿವರಗಳು:

ರೂ. ಲಕ್ಷಗಳಲ್ಲಿ

| ಕ್ರ.ಸಂ | ಸಂಸ್ಥೆಯ ಹೆಸರು ಮತ್ತು ವಿಳಾಸ | ತಾಲ್ಲೂಕು | ಮಂಜೂರಾತಿ ವರ್ಷ | ಉದ್ದೇಶ (ಸಮುದಾಯ ಭವನ/ವಿದ್ಯಾರ್ಥಿ ನಿಲಯ) | ಮಂಜೂರಾದ ಮೊತ್ತ | ಜಿಲ್ಲಾಧಿಕಾರಿಗಳಿಗೆ ಬಿಡುಗಡೆಯಾದ ಮೊತ್ತ | ಸಂಸ್ಥೆಗೆ ಬಿಡುಗಡೆ ಮಾಡಿರುವ ಮೊತ್ತ | ಜಿಲ್ಲಧಿಕಾರಿಗಳ ಪಿ.ಡಿ.ಖಾತೆಯಲ್ಲಿ ಬಾಕಿ ಇರುವ ಮೊತ್ತ | ಕಟ್ಟಡದ ಕಾಮಗಾರಿ ಪ್ರಗತಿ ಹಂತ | ಷರಾ |
|---|---|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 | 10 | 11 |
| 1 | ಉತ್ತರಕನ್ನಡ ಜಿಲ್ಲೆಯ ಅಂಕೋಲಾ ತಾಲೂಕಾ ಆರ್ಯ ಈಡಿಗ ನಾಮಧಾರಿ ನೌಕರರ ಕ್ಷೇಮಾಭಿವೃದ್ಧಿ ಸಂಘ (ರಿ) ಅಂಕೋಲಾ | ಅಂಕೋಲಾ | 2018-19 | ಸಮುದಾಯಭವನ | 25.00 | 2.50 | 2.50 | 0.00 | ಮೇಲ್ಛಾವಣಿ ಹಂತ | |
| 2 | ಉತ್ತರಕನ್ನಡ ಜಿಲ್ಲೆ, ಶಿರಸಿ ಸುವರ್ಣಕಲಾಕಾರರ ಸಂಘ (ರಿ) ಇವರ ವತಿಯಿಂದ ಶಿರಸಿ ತಾಲೂಕಾ ಕೇಂದ್ರದಲ್ಲಿ ನಿರ್ಮಾಣವಾಗುತ್ತಿರುವ ದೈವಜ್ಞ ಸಮುದಾಯಭವನದ ಮುಂದುವರೆದ ಕಾಮಗಾರಿ | ಶಿರಸಿ | 2018-19 | ಸಮುದಾಯಭವನ | 25.00 | 2.50 | 2.50 | 0.00 | ಮೊದಲನೇ ಮಹಡಿ ಕಾಮಗಾರಿ ಪ್ರಗತಿಯಲ್ಲಿದೆ | |
| 3 | ಜಗದ್ಗುರು ವೀರ ಸಿಂಹಾಸನ ಸಂಸ್ಥಾನ ಪೀಠ (ರಿ), ಬಾಳೆಹುನ್ನೂರು, ಚಿಕ್ಕಮಗಳೂರು ಜಿಲ್ಲೆ ರವರ ವತಿಯಿಂದ ಶ್ರೀ ವೀರಶೈವ ಮಠ ಗೋಕರ್ಣ, ಕುಮಟಾದಲ್ಲಿ ಸಮುದಾಯಭವನ ನಿರ್ಮಾಣ | ಕುಮಟಾ | 2019-20 | ಸಮುದಾಯಭವನ | 300.00 | 87.50 | 75.00 | 12.50 | ಮುಕ್ತಾಯ ಹಂತದಲ್ಲಿದ್ದು, ಪ್ಲಾಸ್ಟರಿಂಗ್, ಟೈಲ್ಸ್ ಅಳವಡಿಕೆ ಹಾಗೂ ಸುಣ್ಣ ಬಣ್ಣ ಬಾಕಿ ಇರುತ್ತದೆ. | |
| 4 | ಹಾಲಕ್ಕಿ ಒಕ್ಕಲು ಸಮುದಾಯ ಭವನ, ಕುಮಟಾ ಟೌನ್ ಉ.ಕ ಜಿಲ್ಲೆ | ಕುಮಟಾ | 2020-21 | ಸಮುದಾಯಭವನ | 100.00 | 100.00 | 100.00 | 0.00 | ಕಾಮಗಾರಿ ಮುಕ್ತಾಯಗೊಂಡಿದೆ | |
| 5 | ಉತ್ತರಕನ್ನಡ ಜಿಲ್ಲೆಯ ಹೊನ್ನಾವರ ತಾಲೂಕಿನ ಮಂಕಿ ಹಳೇಮಠ, ಗ್ರಾಮ ಪಂಚಾಯತ್ ಕರಾವಳಿ ವಿದ್ಯಾವರ್ಧಕ ಸಂಘದ ಸಭಾ ಭವನ ನಿರ್ಮಾಣ | ಹೊನ್ನಾವರ | 2020-21 | ಸಮುದಾಯಭವನ | 5.00 | 1.25 | 1.25 | 0.00 | ಮೇಲ್ಛಾವಣಿ ಹಂತ | |
| 6 | ಉತ್ತರಕನ್ನಡ ಜಿಲ್ಲೆ, ಭಟ್ಕಳ ತಾಲೂಕಿನ ಶಿರಾಲಿ ಗ್ರಾಮ ಪಂಚಾಯತ್ ಮಣ್ಕೊಂಡ ಮಹಾಸತಿ ಸಭಾ ಭವನ ನಿರ್ಮಾಣ | ಭಟ್ಕಳ | 2020-21 | ಸಮುದಾಯಭವನ | 5.00 | 0.00 | 0.00 | 0.00 | ಕಾಮಗಾರಿ ಪ್ರಾರಂಭಿಸಿಲ್ಲ | ಸಂಸ್ಥೆಯು ನೋಂದಣಿಯಾಗಿರುವುದಿಲ್ಲ. |
| 7 | ಉತ್ತರಕನ್ನಡ ಜಿಲ್ಲೆ, ಭಟ್ಕಳ ತಾಲೂಕಿನ ಬೆಳಕೆ ಗ್ರಾಮ ಪಂಚಾಯತ್ ಕೊಚರೆ ದುರ್ಗಾಪರಮೇಶ್ವರಿ ಸಭಾ ಭವನ ನಿರ್ಮಾಣ | ಭಟ್ಕಳ | 2020-21 | ಸಮುದಾಯಭವನ | 5.00 | 0.00 | 0.00 | 0.00 | ಕಾಮಗಾರಿ ಪ್ರಾರಂಭಿಸಿಲ್ಲ. | ಸಂಸ್ಥೆಯ ಹೆಸರಿನಲ್ಲಿ ನಿವೇಶನ ಹೊಂದಿರುವುದಿಲ್ಲ. |
| 8 | ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರ ತಾಲೂಕಿನ ಬಳ್ಕೂರು ಗ್ರಾಮ ಪಂಚಾಯತ್ ಹಾಮಕ್ಕಿ, ಸಭಾ ಭವನ ನಿರ್ಮಾಣ | ಹೊನ್ನಾವರ | 2020-21 | ಸಮುದಾಯಭವನ | 5.00 | 0.00 | 0.00 | 0.00 | ಕಾಮಗಾರಿ ಪ್ರಾರಂಭಿಸಿಲ್ಲ. | ನಿವೇಶನ ಹೊಂದಿರುವುದಿಲ್ಲ. |
| 9 | ಉತ್ತರ ಕನ್ನಡ ಜಿಲ್ಲೆಯ ಭಟ್ಕಳ ತಾಲೂಕಿನ ಹೆಬಳೆ ಗ್ರಾಮ ಪಂಚಾಯತ್ ಕುಕನೀರ ವೆಂಕಟೇಶ್ವರ ಸಭಾ ಭವನ ನಿರ್ಮಾಣ | ಭಟ್ಕಳ | 2020-21 | ಸಮುದಾಯಭವನ | 5.00 | 0.00 | 0.00 | 0.00 | ಕಾಮಗಾರಿ ಪ್ರಾರಂಭಿಸಿಲ್ಲ. | ಸಂಸ್ಥೆಯು ನೋಂದಣಿಯಾಗಿರುವುದಿಲ್ಲ. |
| ಒಟ್ಟು ಮೊತ್ತ | | | | | 475.00 | 193.75 | 181.25 | 12.50 | | |

ಅನುಬಂಧ-2

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣಕ್ಕೆ ಸಹಾಯಧನ ನೀಡುವ ಕಾರ್ಯಕ್ರಮದ ಪರಿಷ್ಕೃತ ಮಾರ್ಗಸೂಚಿಗಳು

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಸಕಇ 208 ಬಿಎಂಎಸ್ 2010, ದಿನಾಂಕ: 04/09/2010.
2. ಸರ್ಕಾರದ ಆದೇಶ ಸಂಖ್ಯೆ: ಸಕಇ 178 ಬಿಎಂಎಸ್ 2012, ದಿನಾಂಕ: 06/06/2012.
3. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 359 ಬಿಎಂಎಸ್ 2013 ದಿನಾಂಕ: 21.12.2013.
4. ಆಯುಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಪ್ರಸ್ತಾವನೆ ಸಂಖ್ಯೆ:ಹಿಂವಕಇ/ಸ-5/ಸಿಆರ್-33/2014-15, ದಿನಾಂಕ: 07.08.2014

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣ ಕಾರ್ಯಕ್ರಮಗಳಿಗೆ ಸಹಾಯಧನ ಮಂಜೂರು ಮಾಡುವ ಕುರಿತು ಮಾರ್ಗಸೂಚಿಗಳಲ್ಲಿ ಕೆಲವು ಮಾನದಂಡಗಳನ್ನು ನಿಗದಿಪಡಿಸಿ ಆದೇಶ ಹೊರಡಿಸಲಾಗಿದೆ. ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಆದೇಶದಲ್ಲಿ ಸಹ ಹಿಂದುಳಿದ ವರ್ಗಗಳ ವಿವಿಧ ಸಮುದಾಯಗಳಿಗೆ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡಗಳ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಸಹಾಯಧನ ಮಂಜೂರು ಮಾಡುವ ಕುರಿತು ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ತದನಂತರ, ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ಆದೇಶದಲ್ಲಿ ಸಹ ಹಿಂದುಳಿದ ವರ್ಗಗಳ ವಿವಿಧ ಸಮುದಾಯಗಳಿಗೆ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡಗಳ ನಿರ್ಮಾಣಕ್ಕಾಗಿ ಸರ್ಕಾರದ ಸಹಾಯಧನ ಮಂಜೂರು ಮಾಡುವ ಕುರಿತು ಮಾರ್ಗಸೂಚಿಗಳನ್ನು ಪರಿಷ್ಕರಿಸಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರ.ಸಂ(4)ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ರವರು ಪ್ರಸ್ತಾವನೆ ಸಲ್ಲಿಸಿ, ಹಿಂದುಳಿದ ವರ್ಗಗಳ ವಿವಿಧ ಜಾತಿಗಳಿಗೆ ಸೇರಿದ ನೋಂದಾಯಿತ ಸಂಘ-ಸಂಸ್ಥೆಗಳಿಗೆ ಸಮುದಾಯಗಳಿಗೆ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣಕ್ಕೆ ಸರ್ಕಾರ ಧನ ಸಹಾಯ ಮಂಜೂರಾತಿ ಮಾಡುವ ಕುರಿತು ಹಾಲಿ ಇರುವ ಮಾರ್ಗಸೂಚಿಗಳನ್ನು ಪರಿಷ್ಕರಿಸಿ ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸಲು ಪ್ರಸ್ತಾಪಿಸಿರುತ್ತಾರೆ.

-----2

ಮೇಲಿನ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಸಮುದಾಯ ಭವನ/ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕೆ ಸಹಾಯಧನ ಮಂಜೂರಾತಿ ನೀಡುವ ಸಂಬಂಧ ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸಲು ಸರ್ಕಾರವು ತೀರ್ಮಾನಿಸಿದ್ದು ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 695 ಬಿಎಂಎಸ್ 2014 (ಭಾ-2), ದಿನಾಂಕ: 05/11/2014**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ಸಹಾಯಧನ ನೀಡುವ ಕುರಿತು ಮಾರ್ಗಸೂಚಿಗಳನ್ನು ಅನುಬಂಧ-ಅ, ಅನುಬಂಧ-ಆ ಮತ್ತು ಅನುಬಂಧ-ಇ ರಲ್ಲಿ ಲಗತ್ತಿಸಿರುವಂತೆ ಪರಿಷ್ಕರಿಸಿ ಈ ಮಾರ್ಗಸೂಚಿಗಳು ದಿನಾಂಕ:21.12.2013ರಿಂದ ಪೂರ್ವಾನ್ವಯವಾಗುವಂತೆ ಜಾರಿಗೆ ಬರುವಂತೆ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ಆರ್. ಎರೆಕುಪ್ಪಿ)
ಸರ್ಕಾರದ ಅಧೀನ ಕಾರ್ಯದರ್ಶಿ-2 (ಪ್ರಭಾರ)
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು- ಇವರಿಗೆ ಮುಂದಿನ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, 2ನೇ ಮಹಡಿ, ವಿಕಾಸ ಸೌಧ, ಬೆಂಗಳೂರು ಇವರಿಗೆ ಕಳುಹಿಸಲು ಕೋರಿದೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು
2. ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನೆ ಇಲಾಖೆ
4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
5. ಖಜಾನಾಧಿಕಾರಿಗಳು ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಎಲ್ಲಾ ಜಿಲ್ಲಾಧಿಕಾರಿಗಳು } ಆಯುಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಮೂಲಕ
7. ಎಲ್ಲಾ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು }
8. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
9. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿಗಳ ಆಪ್ತ ಸಹಾಯಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು

## ಅನುಬಂಧ-ಅ

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

### ಹಿಂದುಳಿದ ವರ್ಗಗಳ ವಿವಿಧ ಸಮುದಾಯಗಳಿಗೆ, ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣಕ್ಕೆ ಸಹಾಯಧನ ಕಾರ್ಯಕ್ರಮದ ಮಾರ್ಗಸೂಚಿಗಳು

1. ಉದ್ದೇಶ:-

ಹಿಂದುಳಿದ ವರ್ಗಗಳ ವಿವಿಧ ಜಾತಿ/ಜನಾಂಗಗಳ ಸಮುದಾಯ ಚಟುವಟಿಕೆಗಳನ್ನು ಹಾಗೂ ವಿದ್ಯಾರ್ಥಿ ನಿಲಯಗಳನ್ನು ನಡೆಸಲು ವಿವಿಧ ಹಿಂದುಳಿದ ವರ್ಗಗಳ ಜಾತಿಗಳಿಗೆ ಸೇರಿದ ಸಂಘ ಸಂಸ್ಥೆಗಳಿಗೆ ಸಮುದಾಯ ಭವನ/ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕೆ ಸರ್ಕಾರದಿಂದ ಅನುದಾನವನ್ನು ಮಂಜೂರು ಮಾಡುವ ಉದ್ದೇಶವನ್ನು ಹೊಂದಿರುತ್ತದೆ.

2. ಅರ್ಹತೆ:

ಈ ಕಾರ್ಯಕ್ರಮದಡಿ ಸಹಾಯಧನ ಪಡೆಯಲು ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿ ಗೆ ಸೇರಿದ ನೋಂದಾಯಿತ ಸಂಘ /ಸ್ವಯಂ ಸೇವಾ ಸಂಸ್ಥೆ / ಟ್ರಸ್ಟ್‌ಗಳು ಅರ್ಹರಿರುತ್ತವೆ.

3. ಸಹಾಯಧನ ಮಂಜೂರಾತಿಗೆ ಮಾರ್ಗಸೂಚಿಗಳು:

1. ಸಹಾಯಧನ ಪಡೆಯುವ ಸಂಸ್ಥೆಯು, ಕರ್ನಾಟಕ ಸಂಘ-ಸಂಸ್ಥೆಗಳ ನೋಂದಣಿ ಕಾಯ್ದೆ 1960 ಅಥವಾ ಟ್ರಸ್ಟ್ ಕಾಯ್ದೆಯನ್ವಯ/ನೋಂದಣಿ ನಿಯಮಗಳನ್ವಯ ನೋಂದಾಯಿತ ಸಂಸ್ಥೆಯಾಗಿರಬೇಕು. ಸಂಸ್ಥೆಯು ನೋಂದಣಿಯಾಗಿ ಕನಿಷ್ಟ 2 ವರ್ಷಗಳಾಗಿರಬೇಕು.
2. ಟ್ರಸ್ಟ್‌ನ ಸದಸ್ಯರು ಬೇರೆ ಬೇರೆ ಕುಟುಂಬಗಳಿಗೆ ಸೇರಿದವರಾಗಿರಬೇಕು.
3. ಸಹಾಯಧನ ಬಯಸುವ ಸಂಘ ಸಂಸ್ಥೆಗಳು/ಟ್ರಸ್ಟ್‌ಗಳು, ಹಿಂದಿನ 2 ವರ್ಷಗಳ ಆಡಿಟ್ ವರದಿಗಳನ್ನು, ಚಾರ್ಟರ್ಡ್ ಅಕೌಂಟೆಂಟ್‌ರವರಿಂದ ಆಡಿಟ್ ಮಾಡಿಸಿ ಅರ್ಜಿಯೊಂದಿಗೆ ಸಲ್ಲಿಸಬೇಕು.
4. ಸಮುದಾಯ ಭವನ/ವಿದ್ಯಾರ್ಥಿ ನಿಲಯದ ಕಟ್ಟಡದ ನಿರ್ಮಾಣದ ಅನುದಾನ ಬಯಸುವವರು ಅಂದಾಜು ವೆಚ್ಚದ ಕನಿಷ್ಠ 25 ರಷ್ಟು ಮೊತ್ತವನ್ನು ಸ್ವಂತ ಸಂಪನ್ಮೂಲಗಳಿಂದ ಭರಿಸಬೇಕು.
5. ಸಹಾಯಧನ ಬಯಸುವ ಸಂಘ/ಸಂಸ್ಥೆಗಳು/ಟ್ರಸ್ಟ್‌ಗಳು ಉದ್ದೇಶಿಸಿರುವ ಕಟ್ಟಡ ನಿರ್ಮಾಣಕ್ಕೆ ಸಂಸ್ಥೆಯ ಹೆಸರಿನಲ್ಲಿ ಜಮೀನು/ನಿವೇಶನವನ್ನು ಹೊಂದಿರಬೇಕು ಅಥವಾ ಸರ್ಕಾರಿ/ ಸರ್ಕಾರೇತರ ಸಂಸ್ಥೆಗಳಿಂದ ಕನಿಷ್ಠ 30 ವರ್ಷಗಳಿಗಿಂತ ಕಡಿಮೆ ಇಲ್ಲದ ಅವಧಿಗೆ ಗುತ್ತಿಗೆಗೆ (ಲೀಸ್) ಪಡೆದಿರಬೇಕು.
6. ಕಟ್ಟಡದ ನೀಲ ನಕ್ಷೆಗೆ ಸ್ಥಳೀಯ ಮಹಾನಗರಪಾಲಿಕೆ/ನಗರಸಭೆ / ಪುರಸಭೆ / ಗ್ರಾಮ ಪಂಚಾಯ್ತಿಯಿಂದ ಅನುಮೋದನೆ ಪಡೆದಿರಬೇಕು ಮತ್ತು ಕಟ್ಟಡ ನಿರ್ಮಿಸಲು ಪರವಾನಿಗೆಯನ್ನು ಪಡೆದಿರಬೇಕು
7. ಉದ್ದೇಶಿತ ಕಟ್ಟಡದ ಅಂದಾಜು ಪಟ್ಟಿಯನ್ನು ಸರ್ಕಾರದ ಇಲಾಖೆ/ಸಂಸ್ಥೆಗಳ ಸಹಾಯಕ ಕಾರ್ಯಪಾಲಕ ಅಭಿಯಂತರರು/ಕಾರ್ಯಪಾಲಕ ಅಭಿಯಂತರರು ಅಥವಾ ಅಂಗೀಕೃತ ಅಭಿಯಂತರರಿಂದ ಅಥವಾ ಅಂಗೀಕೃತ ವಾಸ್ತುಶಿಲ್ಪಿಗಳಿಂದ ಅನುಮೋದಿಸಲ್ಪಟ್ಟಿರಬೇಕು.

8. ಈ ಕೆಳಗಿನ ಪ್ರದೇಶಗಳಲ್ಲಿ ನಿರ್ಮಿಸುವ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡಗಳಿಗೆ ಅನುದಾನದ ಗರಿಷ್ಠ ಮಿತಿಯನ್ನು ಕೆಳಕಂಡಂತೆ ನಿಗದಿಪಡಿಸಿದೆ.

| ಕ್ರ ಸಂ | ಸ್ಥಳ | ಗರಿಷ್ಠ ಸಹಾಯಧನ |
|---|---|---|
| 1 | ಗ್ರಾಮ ಪಂಚಾಯಿತಿ /ಪಟ್ಟಣ ಪಂಚಾಯಿತಿ | ರೂ.10.00 ಲಕ್ಷ |
| 2 | ತಾಲ್ಲೂಕು ಕೇಂದ್ರ ಸ್ಥಾನ, | ರೂ.25.00 ಲಕ್ಷ |
| 3 | ಜಿಲ್ಲಾ ಕೇಂದ್ರಸ್ಥಾನ | ರೂ.50.00 ಲಕ್ಷ |

ಮೇಲ್ಕಂಡ ಗರಿಷ್ಠ ಸಹಾಯಧನ ಮೊತ್ತವನ್ನು ಸಡಿಲಗೊಳಿಸಿ ಹೆಚ್ಚಿನ ಮೊತ್ತವನ್ನು ಮಂಜೂರು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

9. ಸಹಾಯಧನ ಪಡೆಯಲಿಚ್ಛಿಸುವ ಸಂಸ್ಥೆಗಳು / ಟ್ರಸ್ಟ್‌ಗಳು ಅನುಬಂಧ-ಆ 'ರ' ಅರ್ಜಿ ನಮೂನೆಯಲ್ಲಿ ನಿಗದಿತ ದಾಖಲಾತಿಯೊಂದಿಗೆ, ಅರ್ಜಿಯನ್ನು ಸಂಬಂಧಿಸಿದ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ಸಲ್ಲಿಸಬೇಕು.

10. ಒಂದು ಸಂಘ ಅಥವಾ ಸಂಸ್ಥೆಯು ಈ ಕಾರ್ಯಕ್ರಮದಡಿ ಇಲಾಖೆಯಿಂದ ಒಂದು ಸ್ಥಳದಲ್ಲಿ ಒಂದು ಬಾರಿ ಕಟ್ಟಡ ನಿರ್ಮಾಣ ಮಾಡಲು ಮಾತ್ರ ಸಹಾಯಧನ ಪಡೆಯಲು ಅರ್ಹವಾಗಿರುತ್ತದೆ.

11. ಸಹಾಯಧನದ ಮಂಜೂರಾತಿ ಆದೇಶ ನೀಡಿದ ಕೂಡಲೇ ಸಂಸ್ಥೆಯು ಅನುಬಂಧ-ಈ ರಲ್ಲಿರುವಂತೆ ಕನಿಷ್ಠ ರೂ.100/- ರ ಛಾಪಾ ಕಾಗದದಲ್ಲಿ ಕರಾರು ಪತ್ರವನ್ನು ಸಂಬಂಧಿಸಿದ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗೆ ಸಲ್ಲಿಸಬೇಕು.

12. ಮಂಜೂರು ಮಾಡಿದ ಸಹಾಯಧನವನ್ನು ಒಂದೇ ಕಂತಿನಲ್ಲಿ ಸಂಬಂಧಿಸಿದ ಜಿಲ್ಲಾಧಿಕಾರಿಗಳ ಪಿ.ಡಿ ಖಾತೆ/ಇತರೆ ಖಾತೆಗಳಿಗೆ ಬಿಡುಗಡೆ ಮಾಡುವುದು.

13. ಸರ್ಕಾರದಿಂದ ನೇರವಾಗಿ ಸಹಾಯಧನ ಮಂಜೂರಾದ ಪ್ರಕರಣಗಳಲ್ಲಿ ಮಾರ್ಗಸೂಚಿಯಲ್ಲಿರುವ ದಾಖಲಾತಿಗಳನ್ನು ಆಯಾ ಜಿಲ್ಲಾಧಿಕಾರಿಗಳು, ಸಂಸ್ಥೆಗಳಿಂದ ಪಡೆದು ಹಣ ಬಿಡುಗಡೆ ಮಾಡುವುದು.

14. ಸಂಬಂಧಿಸಿದ ಸಂಸ್ಥೆಗೆ, ಕಟ್ಟಡದ ಕಾಮಗಾರಿಯ ಪ್ರಗತಿಯನ್ನು ಆಧರಿಸಿ ಜಿಲ್ಲಾಧಿಕಾರಿಗಳ ಹಂತದಲ್ಲಿಯೇ ಮೂರು ಕಂತುಗಳಲ್ಲಿ ಸಹಾಯಧನವನ್ನು 25:50:25ರ ಅನುಪಾತದಂತೆ ಬಿಡುಗಡೆ ಮಾಡುವುದು. (ಮಂಜೂರಾತಿ ಆದೇಶದೊಂದಿಗೆ, ಮೇಲ್ಛಾವಣಿ ಹಂತ ಮತ್ತು ಮುಕ್ತಾಯದ ಹಂತ)

15. ಕಟ್ಟಡ ನಿರ್ಮಾಣಕ್ಕೆ ಮೊದಲನೇ ಕಂತಿನ ಸಹಾಯಧನ ಪಡೆದ ದಿನಾಂಕದಿಂದ ನಾಲ್ಕು ತಿಂಗಳುಗಳೊಳಗಾಗಿ ಕಟ್ಟಡದ ಕಾಮಗಾರಿಯನ್ನು ಸಂಸ್ಥೆ ಪ್ರಾರಂಭಿಸದಿದ್ದಲ್ಲಿ, ಬಿಡುಗಡೆ ಮಾಡಲಾಗಿರುವ ಪೂರ್ಣ ಮೊತ್ತವನ್ನು ಸಂಸ್ಥೆಯಿಂದ ಜಿಲ್ಲಾಧಿಕಾರಿಗಳು ಹಿಂದಕ್ಕೆ ಪಡೆಯತಕ್ಕದ್ದು.

16. ಕಟ್ಟಡ ನಿರ್ಮಾಣಕ್ಕೆ, ಮೊದಲನೇ ಕಂತಿನ ಸಹಾಯಧನ ಪಡೆದ ದಿನಾಂಕದಿಂದ ಮೂರು ವರ್ಷಗಳೊಳಗಾಗಿ, ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸತಕ್ಕದ್ದು. ಮೂರು ವರ್ಷಗಳೊಳಗಾಗಿ ಕಟ್ಟಡವನ್ನು ಪೂರ್ಣಗೊಳಿಸದಿದ್ದಲ್ಲಿ ಅದುವರೆಗೆ ಮಂಜೂರು ಮಾಡಿದ ಮೊತ್ತವನ್ನು ಮತ್ತು ಅದರ ಮೇಲೆ ಶೇ.10 ರಷ್ಟು ಬಡ್ಡಿಯನ್ನು ಸದರಿ ಸಂಸ್ಥೆಯಿಂದ ವಸೂಲು ಮಾಡಲಾಗುವುದು. ಆದರೆ, ಸಂಸ್ಥೆಯು ನೀಡುವ ವಿವರಣೆಯನ್ನು ಪರಿಶೀಲಿಸಿ, ಕಟ್ಟಡ ನಿರ್ಮಾಣಕ್ಕೆ ಹೆಚ್ಚುವರಿ ಕಾಲಾವಕಾಶವನ್ನು, ಆಯುಕ್ತರು/ನಿರ್ದೇಶಕರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ನೀಡಬಹುದು. ಆದರೆ ಇದು ಒಟ್ಟಾರೆ 4 ವರ್ಷಗಳಿಗೆ ಮೀರಬಾರದು.

17. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಕಟ್ಟಡದ ಕಾಮಗಾರಿಯ ಆರ್ಥಿಕ ಮತ್ತು ಭೌತಿಕ ಪ್ರಗತಿಯ ಬಗ್ಗೆ ವರದಿಯನ್ನು 8 ವಿವಿಧ ಕೋನಗಳಿಂದ ತೆಗೆದ ಛಾಯಾಚಿತ್ರಗಳನ್ನು ಆಧರಿಸಿ ಜಿಲ್ಲಧಿಕಾರಿಗಳು ಹಣ ಬಿಡುಗಡೆ ಮಾಡುವುದು.
18. ಸರ್ಕಾರದ ಅನುದಾನ ಪಡೆದು ನಿರ್ಮಿಸುವ ವಿದ್ಯಾರ್ಥಿ ನಿಲಯದ ಕಟ್ಟಡವನ್ನು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಉಪಯೋಗಕ್ಕೆ ಮಾತ್ರ ಬಳಸತಕ್ಕದ್ದು.
19. ಈ ಕಾರ್ಯಕ್ರಮದಡಿ ಸರ್ಕಾರದ ಸಹಾಯಧನ ಪಡೆದು ನಿರ್ಮಿಸುವ ಕಟ್ಟಡವನ್ನು ಯಾವುದೇ ರಾಜಕೀಯ ಉದ್ದೇಶಗಳಿಗೆ ಬಳಸತಕ್ಕದ್ದಲ್ಲ.
20. ನಿರ್ಮಾಣ ಮಾಡಿರುವ ಕಟ್ಟಡವನ್ನು ಸಂಘ/ ಸಂಸ್ಥೆಯ ಧ್ಯೇಯೋದ್ದೇಶಗಳಿಗೆ ಅನುಗುಣವಾಗಿ ಮಾತ್ರ ಬಳಸಬೇಕು.
21. ವಿದ್ಯಾರ್ಥಿ ನಿಲಯ/ಸಮುದಾಯ ಭವನ ಕಟ್ಟಡವನ್ನು ನಿರ್ಮಾಣದ ನಂತರ, ಸಂಸ್ಥೆಯು ಉಪಯೋಗಿಸದೇ ಸತತವಾಗಿ ಒಂದು ವರ್ಷ ಖಾಲಿ ಬಿಟ್ಟಲ್ಲಿ, ಇಲಾಖೆಯು ಸದರಿ ಸಮುದಾಯ ಭವನ /ವಿದ್ಯಾರ್ಥಿ ನಿಲಯವನ್ನು ಸ್ವಾಧೀನಕ್ಕೆ ತೆಗೆದುಕೊಳ್ಳುವ ಅಧಿಕಾರವನ್ನು ಹೊಂದಿರುತ್ತದೆ.
22. ಸಮುದಾಯ ಭವನಗಳನ್ನು ನಿರ್ಮಿಸಲು ಹಿಂದುಳಿದ ವರ್ಗಗಳ ಅನುಕೂಲಕ್ಕೋಸ್ಕರ ಅವಶ್ಯಕತೆ ಇರುವ ಗ್ರಾಮಗಳಲ್ಲಿ/ಸ್ಥಳಗಳಲ್ಲಿ ನೋಂದಾಯಿತ ಸಂಘ/ಸ್ವಯಂಸೇವಾ ಸಂಸ್ಥೆಗಳು/ಟ್ರಸ್ಟ್‌ಗಳು ಮುಂದೆ ಬಾರದೆ ಇದ್ದಲ್ಲಿ, ಅಥವಾ ಸಂಸ್ಥೆಗಳು ಇಲ್ಲದಿದ್ದಲ್ಲಿ, ಹಿಂದುಳಿದ ವರ್ಗಗಳ ಸಮುದಾಯ ಭವನಗಳು ಆ ಗ್ರಾಮಗಳಲ್ಲಿ ಅವಶ್ಯಕತೆ ಇದ್ದಲ್ಲಿ, ಅಂತಹ ಗ್ರಾಮಗಳಲ್ಲಿ ಸಮುದಾಯ ಭವನ ನಿರ್ಮಾಣ ಮಾಡಲು ಸರ್ಕಾರಿ/ಗ್ರಾಮ ಪಂಚಾಯ್ತಿ ನಿವೇಶನವಿದ್ದಲ್ಲಿ, ಸಮುದಾಯ ಭವನಗಳನ್ನು ನಿರ್ಮಿತಿ ಕೇಂದ್ರ/ಕೆ.ಆರ್.ಐ.ಡಿ.ಎಲ್/ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಇತ್ಯಾದಿ ಸರ್ಕಾರಿ ಅಂಗ ಸಂಸ್ಥೆ/ಇಲಾಖೆಗಳ ಮುಖಾಂತರ ನಿರ್ಮಾಣ ಮಾಡುವ ಅಧಿಕಾರವನ್ನು ಜಿಲ್ಲಾಧಿಕಾರಿಗಳಿಗೆ ನೀಡಲಾಗಿದೆ. ಈ ರೀತಿ ನಿರ್ಮಾಣ ಮಾಡಲಾದ ಸಮುದಾಯ ಭವನಗಳನ್ನು ಗ್ರಾಮ ಪಂಚಾಯ್ತಿ, ಪಟ್ಟಣ ಪಂಚಾಯ್ತಿ/ಪುರಸಭೆ/ನಗರಸಭೆ/ಮಹಾನಗರ ಪಾಲಿಕೆಗಳ ವಶಕ್ಕೆ ನೀಡುವುದು. ಈ ಸ್ಥಳೀಯ ಸಂಸ್ಥೆಗಳು ಇದರ ಉಸ್ತುವಾರಿ ಮಾಡುವುದು ಹಾಗೂ ಹಿಂದುಳಿದ ವರ್ಗಗಳ ಸಮುದಾಯದ ಚಟುವಟಿಕೆಗಳಿಗೆ ಉಪಯೋಗಿಸುವುದು. ಆಯುಕ್ತರು/ನಿರ್ದೇಶಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಜಿಲ್ಲಾಧಿಕಾರಿಗಳ ಮುಖಾಂತರ ಈ ಬಗ್ಗೆ ಪ್ರಸ್ತಾವನೆ ಬಂದಲ್ಲಿ, ಅಂತಹ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಮಂಜೂರಾತಿ ನೀಡಿ ಸಂಬಂಧಿಸಿದ ಜಿಲ್ಲಾಧಿಕಾರಿಗಳಿಗೆ ಹಣ ಬಿಡುಗಡೆ ಮಾಡುವುದು. ಇಲಾಖೆ/ಜಿಲ್ಲಾಧಿಕಾರಿಗಳ ಮುಖಾಂತರ ನಿರ್ಮಾಣ ಮಾಡುವ ಸಮುದಾಯ ಭವನಗಳಿಗೆ ಅಂದಾಜು ವೆಚ್ಚದ ಪೂರ್ಣ ಮೊತ್ತವನ್ನು ಸರ್ಕಾರದ ವತಿಯಿಂದ ಭರಿಸುವುದು.
23. ಈ ಕಾರ್ಯಕ್ರಮದಡಿ ಆಯವ್ಯಯದಲ್ಲಿ ಹಂಚಿಕೆಯಾದ ಅನುದಾನದ ಶೇ.70ನ್ನು ಪ್ರವರ್ಗ–1 ಹಾಗೂ 2ಎ ಸಮುದಾಯಕ್ಕೆ ಮತ್ತು ಶೇ.30ನ್ನು ಪ್ರವರ್ಗ–3ಎ ಹಾಗೂ 3ಬಿ ಸಮುದಾಯಕ್ಕೆ ಹಂಚಿಕೆಮಾಡುವುದು. ವಿಶೇಷ ಸಂದರ್ಭದಲ್ಲಿ ಸರ್ಕಾರದ ಪೂರ್ವಾನುಮೋದನೆ ಪಡೆದು ಹೆಚ್ಚುವರಿ ಹಂಚಿಕೆ ಮಾಡಬಹುದಾಗಿದೆ.

**4. ಇಲಾಖಾ ಅಧಿಕಾರಿಗಳಿಗೆ ಸೂಚನೆಗಳು:**

1. ಈ ಕೆಳಗೆ ನಮೂದಿಸಿರುವ ಸಹಾಯಧನವನ್ನು ಮಂಜೂರು ಮಾಡುವ ಅಧಿಕಾರವನ್ನು ಈ ಕೆಳಗಿನಂತೆ ವಹಿಸಲಾಗಿದೆ.

| | | |
|---|---|---|
| (ಅ) | ರೂ.10.00ಲಕ್ಷಗಳವರೆಗೆ | – ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ |
| (ಆ) | ರೂ.10.00ಲಕ್ಷಗಳಿಗಿಂತ ಮೇಲ್ಪಟ್ಟು | – ರಾಜ್ಯ ಸರ್ಕಾರ |

2. ಸಂಘ/ಸಂಸ್ಥೆಗಳು ಜಿಲ್ಲಾ ಮಟ್ಟದಲ್ಲಿ ಸಲ್ಲಿಸುವ ಪ್ರಸ್ತಾವನೆಗಳಿಗೆ ಸಂಬಂಧಿಸಿದಂತೆ, ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಸ್ಥಳ ಪರಿಶೀಲನೆ ಮಾಡಿ ಅವರ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು (ಚೆಕ್‌ಲಿಸ್ಟ್ ನಮೂನೆಯೊಂದಿಗೆ) ಸಂಬಂಧಿಸಿದ ಜಿಲ್ಲಾಧಿಕಾರಿಗಳ ಮೂಲಕ ಪ್ರಸ್ತಾವನೆಯನ್ನು ಆಯುಕ್ತರು/ನಿರ್ದೇಶಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರಿಗೆ, ಸಲ್ಲಿಸಬೇಕು. ಆಯುಕ್ತರು/ನಿರ್ದೇಶಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಪ್ರಸ್ತಾವನೆಯನ್ನು ಪರಿಶೀಲಿಸಿ ಅವರಿಗೆ ಪ್ರದತ್ತವಾದ ಆರ್ಥಿಕ ಅಧಿಕಾರ ಪರಿಮಿತಿಯೊಳಗೆ ಸಹಾಯಧನವನ್ನು ಮಂಜೂರು ಮಾಡಿ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡುವುದು. ಆಯುಕ್ತರಿಗೆ ದತ್ತವಾದ ಆರ್ಥಿಕ ಮಿತಿ ಮೀರಿದ್ದಲ್ಲಿ ಅಂತಹ ಪ್ರಸ್ತಾವನೆಗಳನ್ನು ಸರ್ಕಾರದ ಅನುಮೋದನೆಗೆ ಸಲ್ಲಿಸುವುದು.

3. ಸರ್ಕಾರದಿಂದ ಬಿಡುಗಡೆಯಾದ ಅನುದಾನವನ್ನು ಸದ್ಬಳಕೆ ಮಾಡಿಕೊಂಡು ಕಟ್ಟಡವನ್ನು ನಿಗದಿತ ಅವಧಿಯಲ್ಲಿ ಮುಕ್ತಾಯಗೊಳಿಸುವಂತೆ ನೋಡಿಕೊಳ್ಳುವ ಜವಾಬ್ದಾರಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ಸೇರಿರುತ್ತದೆ. ಸಂಸ್ಥೆಯವರು ಮಾರ್ಗಸೂಚಿಗಳಿಗೆ ವಿರುದ್ದವಾಗಿ ನಡೆದುಕೊಂಡ ಸಂದರ್ಭದಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರಿಗೆ ವರದಿ ಮಾಡುವುದು ಹಾಗೂ ಮುಂದಿನ ಕ್ರಮ ವಹಿಸುವುದು.

4. ಈ ಮಾರ್ಗಸೂಚಿಗಳು 2013-14ನೇ ಸಾಲಿನಲ್ಲಿ ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 170 ಬಿಎಂಎಸ್ 2014 ದಿನಾಂಕ: 19/02/2014, ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 170 ಬಿಎಂಎಸ್ 2014 ದಿನಾಂಕ:26/02/2014 ಮತ್ತು ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 206 ಬಿಎಂಎಸ್ 2014 ದಿನಾಂಕ: 04/03/2014 ರಲ್ಲಿ ಬಿಡುಗಡೆ ಮಾಡಿರುವ ಸಮುದಾಯ ಭವನ/ವಿದ್ಯಾರ್ಥಿ ನಿಲಯಗಳಿಗೆ ಕೂಡಾ ಪೂರ್ವಾನ್ವಯವಾಗಿ ಅನ್ವಯಿಸುತ್ತದೆ.

(ಎನ್.ಆರ್. ಎರೆಕುಪ್ಪಿ)
ಸರ್ಕಾರದ ಅಧೀನ ಕಾರ್ಯದರ್ಶಿ-2 (ಪ್ರಭಾರ)
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

30/11/2017

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣಕ್ಕೆ ಸಹಾಯಧನ ನೀಡುವ ಕಾರ್ಯಕ್ರಮದ ಪರಿಷ್ಕೃತ ಮಾರ್ಗಸೂಚಿಗಳು

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಸಕಇ 208 ಬಿಎಂಎಸ್ 2010, ದಿನಾಂಕ: 04/09/2010.
2. ಸರ್ಕಾರದ ಆದೇಶ ಸಂಖ್ಯೆ: ಸಕಇ 178 ಬಿಎಂಎಸ್ 2012, ದಿನಾಂಕ: 06/06/2012.
3. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 359 ಬಿಎಂಎಸ್ 2013 ದಿನಾಂಕ:21.12.2013.
4. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 695 ಬಿಎಂಎಸ್ 2014 (ಭಾಗ-2), ದಿನಾಂಕ:05.11.2014
5. ಆಯುಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಪ್ರಸ್ತಾವನೆ ಸಂಖ್ಯೆ:ಹಿಂವಕಇ-14011/982/2017-ಹಿಂವಕಇ, ದಿನಾಂಕ 21.10.2017

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣ ಕಾರ್ಯಕ್ರಮಗಳಿಗೆ ಸಹಾಯಧನ ಮಂಜೂರು ಮಾಡುವ ಕುರಿತು ಮಾರ್ಗಸೂಚಿಗಳಲ್ಲಿ ಕೆಲವು ಮಾನದಂಡಗಳನ್ನು ನಿಗದಿಪಡಿಸಿ ಆದೇಶ ಹೊರಡಿಸಲಾಗಿದೆ. ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಆದೇಶದಲ್ಲಿ ಸಹ ಹಿಂದುಳಿದ ವರ್ಗಗಳ ವಿವಿಧ ಸಮುದಾಯಗಳಿಗೆ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡಗಳ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಸಹಾಯಧನ ಮಂಜೂರು ಮಾಡುವ ಕುರಿತು ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ತದನಂತರ, ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ಆದೇಶದಲ್ಲಿ ಹಿಂದುಳಿದ ವರ್ಗಗಳ ವಿವಿಧ ಸಮುದಾಯಗಳಿಗೆ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡಗಳ ನಿರ್ಮಾಣಕ್ಕಾಗಿ ಸರ್ಕಾರದ ಸಹಾಯಧನ ಮಂಜೂರು ಮಾಡುವ ಕುರಿತು ಮಾರ್ಗಸೂಚಿಗಳನ್ನು ಪರಿಷ್ಕರಿಸಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರ.ಸಂ(5)ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,ಬೆಂಗಳೂರು ರವರು ಪ್ರಸ್ತಾವನೆ ಸಲ್ಲಿಸಿ, ಮೇಲೆ ಓದಲಾದ ಕ್ರಮ ಸಂಖ್ಯೆ(4)ರ ಆದೇಶದ ಅನುಬಂಧ-ಅ ರ ಕೆಲವೊಂದು ಉಪ ಕ್ರಮಾಂಕಗಳನ್ನು ಪರಿಷ್ಕರಿಸಿ, ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸಲು ಪ್ರಸ್ತಾಪಿಸಿರುತ್ತಾರೆ.

...2

ಅದರಂತೆ ಈ ಪ್ರಸ್ತಾವನೆಯನ್ನು ಪರಿಶೀಲಿಸಿ, ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಸಮುದಾಯ ಭವನ/ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣಕ್ಕೆ ಸಹಾಯಧನ ಮಂಜೂರಾತಿ ನೀಡುವ ಸಂಬಂಧ ಪರಿಷ್ಕೃತ ಮಾರ್ಗಸೂಚಿಯನ್ನು ಹೊರಡಿಸಲು ಸರ್ಕಾರವು ತೀರ್ಮಾನಿಸಿದ್ದು, ಅದರಂತೆ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 1133 ಬಿಎಂಎಸ್ 2017, ದಿನಾಂಕ:29/11/2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ಸರ್ಕಾರಿ ಆದೇಶ ಸಂಖ್ಯೆ:ಹಿಂವಕ 695 ಬಿಎಂಎಸ್ 2014(ಭಾ-2), ದಿನಾಂಕ:05.11.2014ರ ಮಾರ್ಗಸೂಚಿಗೆ ಈ ಕೆಳಕಂಡಂತೆ ಪರಿಷ್ಕೃತ ಮಾರ್ಗಸೂಚಿಯನ್ನು ದಿನಾಂಕ:05.11.2014ರಿಂದ ಪೂರ್ವಾನ್ವಯವಾಗಿ ಜಾರಿಗೊಳಿಸಲು ಆದೇಶಿಸಿದೆ.

<table>
<tr><th>ಹಾಲಿ ಇರುವ ಮಾರ್ಗಸೂಚಿ</th><th>ಪರಿಷ್ಕರಿಸಿರುವ ಮಾರ್ಗಸೂಚಿ</th></tr>
<tr><td>
(ಅ) ಅನುಬಂಧ-ಅ ರ ಕ್ರಮ ಸಂಖ್ಯೆ:3ರ ಉಪ ಕ್ರಮಾಂಕ -(8)ಕ್ಕೆ ಸಂಬಂಧಿಸಿದಂತೆ<br>
ಈ ಕೆಳಗಿನ ಪ್ರದೇಶಗಳಲ್ಲಿ ನಿರ್ಮಿಸುವ ಸಮುದಾಯ ಭವನ/ವಿದ್ಯಾರ್ಥಿನಿಲಯ ಕಟ್ಟಡಗಳಿಗೆ ಅನುದಾನದ ಗರಿಷ್ಠ ಮಿತಿಯನ್ನು ಕೆಳಕಂಡಂತೆ ನಿಗದಿಪಡಿಸಿದೆ.
<table>
<tr><th>ಕ್ರ. ಸಂ</th><th>ಸ್ಥಳ</th><th>ಗರಿಷ್ಠ ಸಹಾಯಧನ</th></tr>
<tr><td>1</td><td>ಗ್ರಾಮ ಪಂಚಾಯಿತಿ/ ಪಟ್ಟಣ ಪಂಚಾಯಿತಿ</td><td>ರೂ.10.00 ಲಕ್ಷ</td></tr>
<tr><td>2</td><td>ತಾಲ್ಲೂಕು ಕೇಂದ್ರ ಸ್ಥಾನ</td><td>ರೂ.25.00 ಲಕ್ಷ</td></tr>
<tr><td>3</td><td>ಜಿಲ್ಲಾ ಕೇಂದ್ರ ಸ್ಥಾನ</td><td>ರೂ.50.00 ಲಕ್ಷ</td></tr>
</table>
ಮೇಲ್ಕಂಡ ಗರಿಷ್ಠ ಸಹಾಯಧನ ಮೊತ್ತವನ್ನು ಸಡಿಲಗೊಳಿಸಿ ಹೆಚ್ಚಿನ ಮೊತ್ತವನ್ನು ಮಂಜೂರು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.
</td><td>
1) ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಕೇಂದ್ರದಲ್ಲಿ ಸಮುದಾಯ ಭವನ/ವಿದ್ಯಾರ್ಥಿನಿಲಯ ಕಟ್ಟಡಗಳ ನಿರ್ಮಾಣಕ್ಕೆ ಹಾಲಿ ಅನುಕ್ರಮವಾಗಿ ನಿಗದಿಪಡಿಸಿರುವ ರೂ.10.00 ಲಕ್ಷ, ರೂ 25.00 ಲಕ್ಷ, ರೂ.50.00 ಲಕ್ಷ ಮಂಜೂರಾತಿ ಮಿತಿಯನ್ನು ಅಗತ್ಯ ಸಂದರ್ಭಗಳಲ್ಲಿ ಸಡಿಲಗೊಳಿಸಿ ವಿಶೇಷ ಪ್ರಕರಣವೆಂದು ಹೆಚ್ಚುವರಿಯಾಗಿ ಸರ್ಕಾರದ ಹಂತದಲ್ಲಿ ಮಂಜೂರು ಮಾಡುವುದು.<br>
2) ಸಮುದಾಯ ಭವನ ಹಾಗೂ ವಿದ್ಯಾರ್ಥಿನಿಲಯ ಕಟ್ಟಡಗಳ ನಿರ್ಮಾಣಕ್ಕೆ ಪ್ರಸ್ತಾವನೆಯಲ್ಲಿ ತಿಳಿಸುವ ಜನಸಂಖ್ಯೆಯನ್ನು ಆಧರಿಸಿ ಹೆಚ್ಚು ಜನಸಂಖ್ಯೆ ಇರುವ ಸ್ಥಳಗಳಲ್ಲಿ ಹಾಲಿ ಇರುವ ಅನುದಾನದ ರೂ.10.00 ಲಕ್ಷ, ರೂ.25.00 ಲಕ್ಷ, ರೂ.50.00 ಲಕ್ಷ ಮಂಜೂರಾತಿ ಮಿತಿಯನ್ನು ಸಡಿಲಗೊಳಿಸಿ ಹೆಚ್ಚುವರಿ ಅನುದಾನವನ್ನು ಮಂಜೂರು ಮಾಡುವುದು.<br>
3) ಈಗಾಗಲೇ ಸಮುದಾಯ ಭವನ/ ವಿದ್ಯಾರ್ಥಿ ನಿಲಯ ಕಟ್ಟಡಗಳ ನಿರ್ಮಾಣಕ್ಕೆ ಒಂದು ಮತ್ತು ಒಂದಕ್ಕಿಂತ ಹೆಚ್ಚು ಬಾರಿ ಅನುದಾನ ಮಂಜೂರು ಮಾಡಿರುವ ಸಮುದಾಯ ಭವನಗಳಿಗೆ ಹೆಚ್ಚುವರಿ ಅನುದಾನ ಅಗತ್ಯವಿದ್ದಲ್ಲಿ, ಸರ್ಕಾರದ ಹಂತದಲ್ಲಿ ವಿಶೇಷ ಪ್ರಕರಣವೆಂದು ಹೆಚ್ಚುವರಿ ಅನುದಾನ ಮಂಜೂರು ಮಾಡುವುದು.
</td></tr>
</table>

...3

| (ಆ) <u>ಅನುಬಂಧ-ಅ ರ ಕ್ರಮ ಸಂಖ್ಯೆ:3ರ ಉಪ ಕ್ರಮಾಂಕ -(23)ಕ್ಕೆ ಸಂಬಂಧಿಸಿದಂತೆ</u><br><br>ಈ ಕಾರ್ಯಕ್ರಮದಡಿ ಆಯವ್ಯಯದಲ್ಲಿ ಹಂಚಿಕೆಯಾದ ಅನುದಾನದ ಶೇ.70ನ್ನು ಪ್ರವರ್ಗ-1 ಹಾಗೂ 2ಎ ಸಮುದಾಯಕ್ಕೆ ಮತ್ತು ಶೇ.30ನ್ನು ಪ್ರವರ್ಗ-3ಎ ಹಾಗೂ 3ಬಿ ಸಮುದಾಯಕ್ಕೆ ಹಂಚಿಕೆ ಮಾಡುವುದು. ವಿಶೇಷ ಸಂದರ್ಭದಲ್ಲಿ ಸರ್ಕಾರದ ಪೂರ್ವಾನುಮೋದನೆ ಪಡೆದು ಹೆಚ್ಚುವರಿ ಹಂಚಿಕೆ ಮಾಡಬಹುದಾಗಿದೆ. | ಈ ಕಾರ್ಯಕ್ರಮದಡಿ ಆಯವ್ಯಯದಲ್ಲಿ ಹಂಚಿಕೆಯಾದ ಅನುದಾನವನ್ನು ಪ್ರವರ್ಗ-1 ಹಾಗೂ 2ಎಗೆ ಮಾತ್ರ ಸೀಮಿತಗೊಳಿಸಿ ಮಂಜೂರು ಮಾಡುವುದು. ಪ್ರವರ್ಗ-3ಎ, 3ಬಿ ಹಾಗೂ ಇತರ ಪ್ರವರ್ಗಗಳಿಗೆ ಅನುದಾನ ಮಂಜೂರು ಮಾಡುವ ಸಂದರ್ಭದಲ್ಲಿ, ಅನುದಾನ ಮಂಜೂರು ಮಾಡಲು ಸರ್ಕಾರದ ಅನುಮೋದನೆ ಕಡ್ಡಾಯವಾಗಿ ಪಡೆಯತಕ್ಕದ್ದು. |
|---|---|

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ:ಹಿಂವಕ 695 ಬಿಎಂಎಸ್ 2014(ಭಾ-2), ದಿನಾಂಕ:05.11.2014ರ ಅನುಬಂಧ-ಅ ರ ಕ್ರಮ ಸಂಖ್ಯೆ:3ರ ಉಪ ಕ್ರಮಾಂಕ:10ನ್ನು ಕೈಬಿಡಲಾಗಿದ್ದು, ಉಳಿದ ಉಪ ಕ್ರಮಾಂಕಗಳು ಮತ್ತು ಅನುಬಂಧಗಳು ದಿನಾಂಕ:05.11.2014ರ ಆದೇಶದಲ್ಲಿ ತಿಳಿಸಿರುವಂತೆ ಯಥಾವತ್ತಾಗಿ ಮುಂದುವರೆಯುವುದು.

ಈ ಆದೇಶವನ್ನು ಸನ್ಮಾನ್ಯ ಮುಖ್ಯಮಂತ್ರಿಯವರ ಟಿಪ್ಪಣಿ ಸಂಖ್ಯೆ 5463, ದಿನಾಂಕ:09.11.2017ರ ಅನುಮೋದನೆಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆರ್. ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು-ಇವರಿಗೆ ಮುಂದಿನ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, 2ನೇ ಮಹಡಿ, ವಿಕಾಸ ಸೌಧ, ಬೆಂಗಳೂರು ಇವರಿಗೆ ಕಳುಹಿಸಲು ಕೋರಿದೆ.

ಗೆ:

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ-II ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನೆ ಇಲಾಖೆ, ಬಹು ಮಹಡಿ ಕಟ್ಟಡ, ಬೆಂಗಳೂರು.
5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.

6. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು
7. ಎಲ್ಲಾ ಜಿಲ್ಲಾಧಿಕಾರಿಗಳು
8. ಎಲ್ಲಾ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು
9. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು.

} ಆಯುಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಮೂಲಕ

10. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
11. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
12. ಸರ್ಕಾರದ ಉಪ ಕಾರ್ಯದರ್ಶಿಗಳ ಆಪ್ತ ಸಹಾಯಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು

---